ಆಡಳಿತ ಸುಧಾರಣಾ ಆಯೋಗದ ವರದಿ ಅನುಷ್ಠಾನ

290(723) - ಶ್ರೀ ಆತ್ಮಾನಂದ ಎಂ.ಎಸ್(ಮಂಡ್ಯ): ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಆಡಳಿತ ಸುಧಾರಣಾ ಆಯೋಗದ ವರದಿಯನ್ನು ಸರ್ಕಾರವು ಅಂಗೀಕರಿಸಿದೆಯೇ;

ಆ) ಹಾಗಿದ್ದಲ್ಲಿ ಎ.ಆರ್.ಸಿ.ಯ ವರದಿಯ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಸರ್ಕಾರವು ಕ್ರಮ ಕೈಗೊಂಡಿದೆಯೇ;

ಇ) ಕ್ರಮ ಕೈಗೊಂಡಿದ್ದಲ್ಲಿ, ಅದರ ವಿವರಗಳೇನು?

ಶ್ರೀ ಎಸ್.ಎಂ. ಕೃಷ್ಣ (ಮುಖ್ಯ ಮಂತ್ರಿಗಳು):

ಅ) ಆಡಳಿತ ಸುಧಾರಣಾ ಆಯೋಗದ ಶಿಫಾರಸ್ಸುಗಳನ್ನು ಸಂಬಂಧಪಟ್ಟ ಸಚಿವಾಲಯದ ಇಲಾಖೆಗಳು ಪರಿಶೀಲಿಸುತ್ತಿವೆ. ಆಯೋಗದ ಶಿಫಾರಸ್ಸುಗಳನ್ನು ಪರಿಶೀಲಿಸಿ ಸರ್ಕಾರಕ್ಕೆ ಶಿಫಾರಸ್ಸು ಮಾಡಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ಸಚಿವ ಸಂಪುಟದ ಉಪ ಸಮಿತಿಯನ್ನು ಸಹ ರಚಿಸಲಾಗಿದೆ.

ಆ) ಆಡಳಿತ ಸುಧಾರಣಾ ಆಯೋಗದ ವರದಿಯನ್ನು ಅನುಷ್ಠಾನಕ್ಕೆ ತರಲು ಕ್ರಮ ಜರುಗಿಸಲಾಗುತ್ತಿದೆ.

ಇ) ಆಡಳಿತ ಸುಧಾರಣಾ ಆಯೋಗದ ಈ ಕೆಳಕಂಡ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲಾಗಿದೆ.

1. ಸಚಿವಾಲಯದಲ್ಲಿ ಪೀಠಾಧಿಕಾರಿ ಪದ್ಧತಿ ಜಾರಿ.
2. ಸಚಿವಾಲಯದಲ್ಲಿ ಏಕ ಕಡತ ಪದ್ಧತಿ
3. ರಾಜ್ಯ ಸರ್ಕಾರಿ ನೌಕರರ ವರ್ಗಾವಣೆ ನೀತಿ
4. ಮುಖ್ಯ ಮಂತ್ರಿಯವರ ಅಧ್ಯಕ್ಷತೆಯಲ್ಲಿ ಭ್ರಷ್ಟಾಚಾರ ನಿರ್ಮೂಲನದ ಉನ್ನತ ಮಟ್ಟದ ಸಮಿತಿ ರಚನೆ
5. ಸಾರ್ವಜನಿಕ ಸನ್ನದುಗಳ ತಯಾರಿಕೆ
6. ಸಚಿವಾಲಯ ವಾಚನಾಲಯದ ಸುಧಾರಣೆ
7. ತರಭೇತಿ ನೀತಿ
8. ಸಚಿವಾಲಯದಲ್ಲಿ ಲಾನ್ ಜಾರಿ
9. ಶನಿವಾರಗಳಂದು ಸಭಾ ರಹಿತ ದಿನವೆಂದು ಘೋಷಣೆ
10. ಸರ್ಕಾರದ ಅಧಿಕೃತ ಕೆಲಸಗಳಿಗೆ ಬಾಡಿಗೆ ಆಧಾರದ ಮೇಲೆ ವಾಹನಗಳನ್ನು ಪಡೆಯುವುದು ಇತ್ಯಾದಿ.

ಹದಿಮೂರು ಇಲಾಖೆಗಳ ಕಾರ್ಯ ಸಮೀಕ್ಷೆಯನ್ನು ನಡೆಸಿ ಆಯೋಗವು ಮಾಡಿರುವ ಶಿಫಾರಸ್ಸುಗಳನ್ನು ಆಪರ ಮುಖ್ಯ ಕಾರ್ಯದರ್ಶಿಗಳ ಮಟ್ಟದಲ್ಲಿ ಇಲಾಖೆಯ ಕಾರ್ಯದರ್ಶಿ ಮತ್ತು ಇಲಾಖಾ ಮುಖ್ಯಸ್ಥರೊಂದಿಗೆ ಸಭೆಯನ್ನು ನಡೆಸಿ ಪರಿಶೀಲಿಸಲಾಗುತ್ತಿದೆ.

ರಾಜ್ಯದಲ್ಲಿ ವಿದ್ಯುತ್ ಶುಲ್ಕದ ವಾರ್ಷಿಕ ಪರಿಷ್ಕರಣೆ

291(726) - ಶ್ರೀ ಆತ್ಮಾನಂದ ಎಂ.ಎಸ್(ಮಂಡ್ಯ): ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ವಿದ್ಯುತ್ ದರದಲ್ಲಿ ವಾರ್ಷಿಕ ಹೆಚ್ಚಳ ಮಾಡಲಾಗುತ್ತಿದೆಯೆ.

ಆ) ಹಾಗಿದ್ದಲ್ಲಿ, ಈ ಹೆಚ್ಚಳಕ್ಕೆ ಯಾವ ಮಾನದಂಡವನ್ನು ಅನುಸರಿಸಲಾಗುತ್ತಿದೆ;

ಇ) ಈ ಬಗೆಗಿನ ವಿವರಗಳೇನು?

ಶ್ರೀ ಬಸವರಾಜ್ ಪಾಟೀಲ್ (ಇಂಧನ ರಾಜ್ಯ ಸಚಿವರು):

ಅ) ಇಲ್ಲ

ಆ) ಈ ಕೆಳಕಂಡ ಕಾರಣಗಳಿಂದಾಗಿ ವಿದ್ಯುತ್ ದರವನ್ನು ಪರಿಷ್ಕರಣೆ ಮಾಡುವುದು ಅನಿವಾರ್ಯವಾಗುತ್ತದೆ.

1. ವಾರ್ಷಿಕ ಆದಾಯ ಮತ್ತು ವೆಚ್ಚಗಳ ನಡುವೆ ಇರುವ ಆಗಾಧವಾದ ಅಂತರವು.
2. ರಾಜ್ಯದಲ್ಲಿ ಕಡಿಮೆ ದರದ ಜಲ ವಿದ್ಯುತ್ ಹೆಚ್ಚಿನ ಪ್ರಮಾಣದಲ್ಲಿ ಲಭ್ಯವಿಲ್ಲದ ಕಾರಣ ಹೆಚ್ಚಿನ ದರದ ವಿದ್ಯುತ್ ಖರೀದಿ ಮಾಡಬೇಕಾಗಿರುವುದು.
3. ಹೆಚ್ಚುತ್ತಿರುವ ಬೇಡಿಕೆಯನ್ನು ಸರಿದೂಗಿಸುವ ಸಲುವಾಗಿ ಹೊಸ ಬಂಡವಾಳ ಹೂಡಿಕೆಗೆ ಅವಕಾಶ ಕಲ್ಪಿಸುವುದು.
4. ದರ ನಿಗದಿಯಲ್ಲಿನ ತಾರತಮ್ಯ ಸರಿದೂಗಿಸುವುದು.

ಇ) ಕರ್ನಾಟಕ ವಿದ್ಯುತ್ ಸುಧಾರಣಾ ಕಾನೂನು 1999ರ ಪ್ರಕಾರ ವಿದ್ಯುತ್ ದರದಲ್ಲಿ ವಾರ್ಷಿಕ ಹೆಚ್ಚಳ ಮಾಡಲು ಅವಕಾಶವಿದ್ದರೂ ಸಹ, ರಾಜ್ಯದಲ್ಲಿ ವಾರ್ಷಿಕ ಹೆಚ್ಚಳ ಮಾಡಲಾಗುತ್ತಿಲ್ಲ. ಈಗಿನ ದರ ಪರಿಷ್ಕರಣೆಯು ದಿನಾಂಕ: 1-7-2002 ರಿಂದ ಜಾರಿಗೆ ಬಂದಿರುತ್ತದೆ. ಈ ಪರಿಷ್ಕರಣೆಗೆ ಹಿಂದಿನ ದರದಲ್ಲಿ ಪ್ರಸಕ್ತ ಆರ್ಥಿಕ ವರ್ಷದಲ್ಲಿ ರೆವಿನ್ಯೂ ಕೊರತೆಯು ಸುಮಾರು 3157 ಕೋಟಿ ರೂ. ಗಳಾಗಬಹುದೆಂದು ಅಂದಾಜು ಮಾಡಲಾಗಿದೆ. 1998ರಲ್ಲಿ ಜಲ ವಿದ್ಯುತ್ ಲಭ್ಯತೆಯ ಪ್ರಮಾಣವು ಒಟ್ಟು ಲಭ್ಯತೆಯಲ್ಲಿ 49 ಇದ್ದು, 2002 -03ಕ್ಕೆ ಇದು 33% ಕ್ಕೆ ಇಳಿದಿರುತ್ತದೆ ಮತ್ತು ಹೆಚ್ಚು ದರದ ವಿದ್ಯುತ್ ಪಡೆಯುವಿಕೆಯು 1998ರಲ್ಲಿ 51 ಇದ್ದು, ಇದು 2002 -2003ರಲ್ಲಿ 67% ಕ್ಕೆ ಹೆಚ್ಚಾಗಿರುತ್ತದೆ.